ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಹುದ್ದೆಗಳ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

45 (59) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; ಮತ್ತು ಎಂದಿನಿಂದ ಖಾಲಿ ಇವೆ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಇಲಾಖೆಯಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನೌಕರರ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಯಾವುವು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ ಸಂವಿಧಾನ ಕಲಂ 371(ಜೆ) ಪ್ರಕಾರ ಹೈದರಾಬಾದ್-ಕರ್ನಾಟಕ ಭಾಗದವರಿಗಾಗಿ ಹುದ್ದೆಗಳನ್ನು ಪ್ರತ್ಯೇಕವಾಗಿ ವಿಂಗಡಿಸಲಾಗಿದೆಯೇ? (ವಿಂಗಡಿಸಿದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು)